ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	1857
2.	ಮಾನ್ಯ ಸದಸ್ಯರ ಹೆಸರು	ಶ್ರೀ ಕೆ. ಎ. ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು)
3.	ಉತ್ತರಿಸಬೇಕಾದ ದಿನಾಂಕ	22/03/2021
4.	ಉತ್ತರಿಸುವವರು	ಮಾನ್ಯ ಕಾರ್ಮಿಕ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
ಅ)	ಕಾರ್ಮಿಕ ಇಲಾಖೆಯ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ಕಾರ್ಯವೈಖರಿ ಬಗ್ಗೆ ಭಾರತದ ಲೆಕ್ಕ ನಿಯಂತ್ರಕರು ಮತ್ತು ಮಹಾ ಲೆಕ್ಕ ಪರಿಶೋಧಕರ ಮಾರ್ಚ್ 2019 ಕ್ಕೆ ಕೊನೆಗೊಂಡ ವರದಿ ಪ್ರಕಾರ ಕ್ಲೈಮುಗಳ ಸಂಸ್ಕರಣೆಯಲ್ಲಿ ಅತಿಯಾದ ವಿಳಂಬ ಯೋಜನೆಗಳ ಸಾಧಾರಣ ಪ್ರಚಾರ ಮತ್ತು ಅಸಾಂಗತ್ಯಗಳು ಮತ್ತು ಅವಾಸ್ತವಿಕ ಷರತ್ತುಗಳಿಂದ ನೋಂದಾಯಿತ ಉದ್ಯೋಗದಾತರು ಮತ್ತು ನಿರ್ಮಾಣ ಕಾರ್ಮಿಕರಿಗೆ ಮಂಡಳಿ ಯೋಜನೆಗಳ ಅಡಿಯಲ್ಲಿ ನೀಡಬೇಕಾಗಿರುವ ನೆರವಿನಲ್ಲಿ ಕೊರತೆ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ವ್ಯವಸ್ಥೆಯನ್ನು ಸರಿಪಡಿಸಲು ಕೈಗೊಂಡಿರುವ ಕ್ರಮಗಳೇನು:	ಹೌದು. ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಎಲ್ಲಾ ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸಲು ಹಾಗೂ ಮಂಡಳಿಯ ಯೋಜನೆಗಳ ಬಗ್ಗೆ ಪ್ರಚಾರ ಮತ್ತು ಅರಿವನ್ನು ಮೂಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. • ಮಂಡಳಿಯಿಂದ ಅರ್ಹ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಇರುವ ವಿವಿಧ ಸೌಲಭ್ಯಗಳನ್ನು ತುರ್ತಾಗಿ ಅನುಮೋದಿಸಿ ನಿಗಧಿತ ಅವಧಿಯೊಳಗೆ ಸಹಾಯಧನವನ್ನು ಒದಗಿಸಲು ಸಂಬಂಧಿಸಿದ ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರಿಗೆ ಮತ್ತು ಕಾರ್ಮಿಕ ಅಧಿಕಾರಿಗಳಿಗೆ ಮಂಜೂರಾತಿ ಅಧಿಕಾರವನ್ನು ವಿಕೇಂದ್ರಿಕರಿಸಲಾಗಿದೆ. • ನಿಗಧಿತ ಅವಧಿಯೊಳಗೆ ಸಹಾಯಧನವನ್ನು ಒದಗಿಸಲು ಉದ್ದೇಶಿಸಿ ಕೆನರಾ ಬ್ಯಾಂಕ್ ಹೊಂಬೇಗೌಡನಗರ ಶಾಖೆ ಇಲ್ಲಿ ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳ ಹೆಸರಲ್ಲಿ ಪ್ರತ್ಯೇಕವಾದ ಬ್ಯಾಂಕ್ ಖಾತೆಗಳನ್ನು ತೆರೆದು ಮುಂಗಡವಾಗಿ ಹಣವನ್ನು ವರ್ಗಾಹಿಸಲಾಗುತ್ತಿದೆ. • ಸದರಿ ಬ್ಯಾಂಕ್ ನಿಂದ ಪ್ರತಿ ದಿನ ಫಲಾನುಭವಿಗಳಿಗೆ ನೆಫ್ಟ್/ ಆರ್.ಟಿ.ಜಿ.ಎಸ್ ಮೂಲಕ ಸಹಾಯಧನವನ್ನು ವರ್ಗಾಯಿಸಲಾಗುತ್ತಿದೆ. ಈ ರೀತಿ ಖಾತೆಗೆ ಸಹಾಯಧನವು ಜಮೆಯಾದ ಪ್ರಕರಣಗಳಲ್ಲಿ ಯಶಸ್ವಿಗೊಂಡ ಫಲಾನುಭವಿಗಳ ವಿವರ ಮತ್ತು ಯಶಸ್ವಿಯಾಗದೇ ಇರುವ ಫಲಾನುಭವಿಗಳ ವಿವರಗಳನ್ನು ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳಿಗೆ ಕಳುಹಿಸಲಾಗುತ್ತಿದೆ.

		• ಸದರಿ ಯಶಸ್ವಿಯಾಗದೆ ಇರುವ ಫಲಾನುಭವಿಗಳ ತಾಂತ್ರಿಕ ದೋಷಗಳನ್ನು ಮತ್ತು ಇತರೆ ಅವಶ್ಯಕತೆ ಇರುವ ದಾಖಲೆಗಳನ್ನು ಸಂಬಂಧಿಸಿದ ಸಹಾಯಕ ಕಾರ್ಮಿಕ ಆಯುಕ್ತರು ಮತ್ತು ಕಾರ್ಮಿಕ ಅಧಿಕಾರಿಗಳು ಪುನಃ ಬ್ಯಾಂಕ್‌ಗೆ ಸಲ್ಲಿಸಿ ಫಲಾನುಭವಿಗಳಿಗೆ ನೇರವಾಗಿ ಬ್ಯಾಂಕ್ ಮೂಲಕ ಸಹಾಯಧನ ಒದಗಿಸಲಾಗುತ್ತಿದೆ. • ಪ್ರತಿ ತಿಂಗಳ ಅಂತ್ಯಕ್ಕೆ ಸಂಬಂಧಿಸಿದ ಸಹಾಯಕ ಕಾರ್ಮಿಕ ಆಯುಕ್ತರು, ಕಾರ್ಮಿಕ ಅಧಿಕಾರಿಗಳು ತಮ್ಮ ಕಛೇರಿಯ ದಾಖಲೆಗಳ ಮಾಹಿತಿಯೊಂದಿಗೆ ಸಂಬಂಧಿಸಿದ ಬ್ಯಾಂಕ್ ಖಾತೆಯ ವಿವರಗಳೊಂದಿಗೆ ಹಾಗೂ ಮಂಡಳಿಯೊಂದಿಗೆ ತಾಳೆ ಮಾಡುವ ಕ್ರಮಗಳನ್ನು ಕೂಡಾ ಕೈಗೊಳ್ಳಲಾಗುತ್ತಿದೆ. • ಸಕಾಲ/ ಸೇವಾ ಸಿಂಧು/ ಕುಂದುಕೊರತೆ ಮೇಲ್ವಿಚಾರಣ ಪೋರ್ಟಲ್‌ನಲ್ಲಿ ಅರ್ಜಿಗಳನ್ನು ವಿಳಂಬ ಮಾಡದೇ ನಿಗಧಿತ ಸಮಯದೊಳಗೆ ಪರಿಶೀಲಿಸಿ ವಿಲೇಮಾಡಲು ಮಂಡಳಿವತಿಯಿಂದ ಕಾಲಕಾಲಕ್ಕೆ ಸೂಕ್ತ ನಿರ್ದೇಶನಗಳನ್ನು ಕ್ಷೇತ್ರಮಟ್ಟದ ಅಧಿಕಾರಿಗಳಿಗೆ ನೀಡಲಾಗಿರುತ್ತದೆ. • ನೋಂದಣಿ ಮತ್ತು ಕ್ಲೇಮ್ ಅರ್ಜಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಕಿ ಇರುವ ಜಿಲ್ಲೆಗಳಿಗೆ ಮಂಡಳಿ ವತಿಯಿಂದ ಒಂದೊಂದು ತಂಡವನ್ನು ಕಳುಹಿಸಿ, ಬಾಕಿ ಇರುವ ಅರ್ಜಿಗಳನ್ನು ವಿಲೇವಾರಿ ಮಾಡಲು ಕ್ರಮವಹಿಸಲಾಗಿರುತ್ತದೆ. • ರಾಜ್ಯದಾದ್ಯಂತ ಕ್ಷೇತ್ರ ಕಛೇರಿಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳಿಗೆ ಒಂದು ದಿನದ ಕಾರ್ಯಾಗಾರವನ್ನು ಏರ್ಪಡಿಸಿ ಕ್ಲೇಮ್ ವಿಲೇವಾರಿ ಕುರಿತು ತರಬೇತಿ ನೀಡಲಾಗಿದ್ದು, ಸದರಿ ಕಾರ್ಯಗಾರಗಳಲ್ಲಿ ಬಾಕಿಯಿರುವ ಅರ್ಜಿಗಳನ್ನು ಶೀಘ್ರವಾಗಿ ವಿಲೇವಾರಿ ಮಾಡುವಂತೆಯೂ ಸಹ ಮಾರ್ಗದರ್ಶನ ನೀಡಲಾಗಿರುತ್ತದೆ. • ಮಂಡಳಿಯಿಂದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೋಂದಣಿ ಮತ್ತು ಕ್ಲೇಮ್ ವಿಲೇವಾರಿಯ ಪ್ರಗತಿಯ ಕುರಿತು ಕ್ಷೇತ್ರ ಮಟ್ಟದ ಎಲ್ಲಾ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗಳಿಗೆ ವಿಡಿಯೋ ಕಾನ್ಫರೆನ್ಸ್ ಮುಖಾಂತರ ಸಭೆ ನಡೆಸಿ, ಸೂಕ್ತ ನಿರ್ದೇಶನಗಳನ್ನು ನೀಡಲಾಗಿರುತ್ತದೆ. • ನೋಂದಣಿ ಮತ್ತು ಕ್ಲೇಮ್ ಅರ್ಜಿಗಳು ಹೆಚ್ಚಿನ ಸಂಖ್ಯೆಯಲ್ಲಿ ಬಾಕಿ ಇರುವ ಜಿಲ್ಲೆಗಳಿಗೆ ಮಂಡಳಿಯಿಂದ ಹೊರಗುತ್ತಿಗೆ ಆಧಾರದ ಮೇಲೆ ಹೆಚ್ಚಿನ ಮಾನವ ಸಂಪನ್ಮೂಲವನ್ನು ಒದಗಿಸಲಾಗಿರುತ್ತದೆ.

		• ಅಲ್ಲದೇ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ನೋಂದಣಿ ಹಾಗೂ ಸೌಲಭ್ಯಗಳ ಕುರಿತು ಜಾಗೃತಿ ಮೂಡಿಸಲು ರಾಜ್ಯಾದಾದ್ಯಂತ ವ್ಯಾಪಕ ಪ್ರಚಾರ ಕಾರ್ಯಕ್ರಮಗಳನ್ನು (IEC) ಕೈಗೊಳ್ಳಲಾಗಿರುತ್ತದೆ.
ಆ)	ಮಂಡಳಿಯಲ್ಲಿ ಹೆಚ್ಚಿನ ಕೆಲಸವನ್ನು ಹೊರಗುತ್ತಿಗೆ ಸಿಬ್ಬಂದಿಗಳು ನಿರ್ವಹಿಸುತ್ತಿದ್ದು ಅವರುಗಳು ನಗದು ಶಾಖೆಯಲ್ಲಿ ಚೆಕ್ /ಡಿಮ್ಯಾಂಡ್ ಡ್ರಾಫ್ಟ್‌ಗಳನ್ನು ಸಹ ನಿರ್ವಹಿಸುತ್ತಿದ್ದು ಒಂದು ವೇಳೆ ನಗದು ದುರುಪಯೋಗವಾದಲ್ಲಿ ಅಂತಹವರನ್ನು ಜವಾಬ್ದಾರಿಯುತರನ್ನಾಗಿ ಮಾಡುವುದು ಕಷ್ಟ ಎನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಕೈಗೊಂಡ ಕ್ರಮಗಳೇನು?	ಮಂಡಳಿಯಲ್ಲಿ ಪ್ರಸ್ತುತ ಹೊರಗುತ್ತಿಗೆ ಸಿಬ್ಬಂದಿಗಳು ಹೆಚ್ಚಿನ ಲಿಪಿಕಾ ಕೆಲಸವನ್ನು ನಿರ್ವಹಿಸುತ್ತಿದ್ದಾರೆ ಎನ್ನುವುದು ವಾಸ್ತವವಾಗಿರುತ್ತದೆ. ಆದರೆ, ಈ ಎಲ್ಲಾ ಸಿಬ್ಬಂದಿಗಳು ಮಂಡಳಿಯ ಅಧಿಕಾರಿಗಳ ನೇರ ಮೇಲ್ನೋಟ, ನಿಯಂತ್ರಣ ಹಾಗೂ ಮಾರ್ಗದರ್ಶನದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅಧಿಕಾರಿಗಳು ಪ್ರತಿ ಸಿಬ್ಬಂದಿಯ ಕಾರ್ಯವೈಖರಿಯನ್ನು ಕಾಲಕಾಲಕ್ಕೆ ಪರಿಶೀಲಿಸಿ ಯಾವುದೇ ದುರಪಯೋಗವಾಗದಂತೆ ಕ್ರಮವಹಿಸುತ್ತಾರೆ. ದಿನಾಂಕ:22-06-2020 ರಂದು ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದ್ದು, ನೇಮಕಾತಿ ನಿಯಮಗಳನ್ವಯ ಸಿಬ್ಬಂದಿಗಳ ನೇಮಕಾತಿಗಾಗಿ ಕ್ರಮ ಕೈಗೊಳ್ಳಲಾಗುತ್ತಿದೆ.

ಕಾಇ 124 ಎಲ್‌ಇಟಿ 2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು